PRED

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016-17ನೇ ಸಾಲಿನ ನಬಾರ್ಡ್ ಸಹಯೋಗದ ಆರ್‌ಐಡಿಎಫ್-22 ಯೋಜನೆಯ ಅನುಷ್ಠಾನಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-
1) ಸರ್ಕಾರಿ ಆದೇಶ ಸಂಖ್ಯೆ:ಇಡಿ 250 ಯೋಸಕ 2016, ದಿನಾಂಕ:30.08.2016.
2) ಸರ್ಕಾರಿ ಆದೇಶ ಸಂಖ್ಯೆ:ಇಡಿ 250 ಯೋಸಕ 2016, ದಿನಾಂಕ:19.01.2017.
3) ಸರ್ಕಾರಿ ಆದೇಶ ಸಂಖ್ಯೆ:ಇಡಿ 250 ಯೋಸಕ 2016, ದಿನಾಂಕ:06.02.2017.
4) ಸರ್ಕಾರಿ ಆದೇಶ ಸಂಖ್ಯೆ:ಆಇ 232 ಬಿಆರ್‌ಎಸ್ 2016, ದಿನಾಂಕ:06.02.2017.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1), ಕ್ರಮಾಂಕ(2), ಕ್ರಮಾಂಕ(3)ರ ಆದೇಶಗಳಲ್ಲಿ, ಕ್ರಮವಾಗಿ 2016-17ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:4202-01-202-1-05-436 (ಯೋಜನೆ) ಅಡಿಯಲ್ಲಿ, ನಬಾರ್ಡ್ ಕಾಮಗಾರಿಗಳಿಗಾಗಿ ಒದಗಿಸಲಾದ ರೂ.7811.00 ಲಕ್ಷಗಳ ಅನುದಾನದಲ್ಲಿ, ಮೊದಲನೇ ಮತ್ತು ಎರಡನೇ ಕಂತಾಗಿ 50% ಮೊತ್ತವನ್ನು, ಅಂದರೆ ರೂ.3905.05 ಲಕ್ಷಗಳನ್ನು ಮೂರನೇ ಕಂತಾಗಿ ರೂ.2000.00 ಲಕ್ಷಗಳನ್ನು ನಾಲ್ಕನೇ ಕಂತಾಗಿ ರೂ.1905.95 ಲಕ್ಷಗಳನ್ನು ಕೆಲವು ಷರತ್ತುಗಳಿಗೆ ಒಳಪಟ್ಟಂತೆ, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4)ರ ಆದೇಶದಲ್ಲಿ, ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ 2016-17ನೇ ಸಾಲಿನ ಆರ್.ಐ.ಡಿ.ಎಫ್-19 ರಿಂದ 22 ರವರೆಗಿನ ವಿವಿಧ ನಬಾರ್ಡ್ ಕಾಮಗಾರಿಗಳನ್ನು 2017-18ನೇ ಸಾಲಿನಲ್ಲಿ ಪೂರ್ಣಗೊಳಿಸಲು ಪ್ರಧಾನ ಲೆಕ್ಕ ಶೀರ್ಷಿಕೆ:4202-01-202-1-05-436(ಯೋಜನೆ) ಅಡಿಯಲ್ಲಿ ರೂ.4000.00 ಲಕ್ಷಗಳಿಗೆ 2016-17ನೇ ಸಾಲಿನ ಪೂರಕ ಅಂದಾಜುಗಳ 3ನೇ ಕಂತಿನಲ್ಲಿ ಸಕ್ರಮಾತಿಗೊಳಿಸುವುದನ್ನು ಕಾಯ್ದಿರಿಸಿ ಮಂಜೂರಾತಿ ನೀಡಲಾಗಿದೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 220 ಯೋಸಕ 2016(ಭಾಗ) ಬೆಂಗಳೂರು, ದಿನಾಂಕ:09.02.2017

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ, ನಬಾರ್ಡ್ ಸಹಯೋಗದ ಆರ್‌ಐಡಿಎಫ್-22ರಡಿ ತೆಗೆದುಕೊಳ್ಳಲಾದ 142 ತೇವಣಿ ವಂತಿಗೆ ಕಾಮಗಾರಿಗಳಿಗಾಗಿ 2016-17ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ:4202-01-202-1-05-436(ಯೋಜನೆ) ಅಡಿಯಲ್ಲಿ ಹೆಚ್ಚುವರಿಯಾಗಿ ಮಂಜೂರಾದ ರೂ.4000.00 ಲಕ್ಷಗಳಲ್ಲಿ ರೂ.3000.00 ಲಕ್ಷಗಳನ್ನು ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರಿಗೆ ಪಾವತಿಸಲು 2016-17ನೇ ಸಾಲಿನ ಪೂರಕ ಅಂದಾಜುಗಳ 3ನೇ ಕಂತಿನಲ್ಲಿ ಸಕ್ರಮಾತಿಗೊಳಿಸುವುದನ್ನು ಕಾಯ್ದಿರಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಿದೆ.

1. ಕಾಮಗಾರಿಗಳನ್ನು ಶೀಘ್ರವಾಗಿ ಅನುಷ್ಠಾನಗೊಳಿಸಿ, ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಶೀಘ್ರವಾಗಿ ಸಲ್ಲಿಸತಕ್ಕದ್ದು.
2. ಬಿಡುಗಡೆಯಾದ ಅನುದಾನಕ್ಕೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರು ಸೂಕ್ತ ಲೆಕ್ಕ ಪತ್ರಗಳನ್ನು ಇಡತಕ್ಕದ್ದು.

Scanned by CamScanner

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 74 ವೆಚ್ಚ-8/2017, ದಿನಾಂಕ:06.02.2017ರ ಅನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

9/12

(ಅಪರ್ಣಾ ಪಾವಟೆ)
ಸರ್ಕಾರದ ಉಪಕಾರ್ಯದರ್ಶಿ(ಯೋಜನೆ)
ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು,
ಶಿಕ್ಷಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.
3. ನಿರ್ದೇಶಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8. ಕೋ ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬೆಂಗಳೂರು.
9. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ (ಪ್ರಾಥಮಿಕ & ಪ್ರೌಢ ಶಿಕ್ಷಣ) ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬೆಂಗಳೂರು.

Scanned by CamScanner